ಶ್ರೀ ಪಿ.ಜಿ.ಆರ್. ಸಿಂಧ್ಯ(ಬೃಹತ್, ಮಧ್ಯಮ, ಸಣ್ಣ ಕೈಗಾರಿಕೆ ಹಾಗೂ ಮೂಲಭೂತ ಸೌಲಭ್ಯಗಳ ಸಚಿವರು):

ಅ) ಸರ್ಕಾರಿ ಸ್ವಾಮ್ಯದಲ್ಲಿ ಯಾವುದೆ ಹೊಸ ಉದ್ಯಮೆಗಳನ್ನು ಪ್ರಾರಂಭಿಸುವ ಉದ್ದೇಶವಿರುವುದಿಲ್ಲ.

ಆ) 1. ಪಾವಗಡ ತಾಲ್ಲೂಕಿನಲ್ಲಿ ಖಾಸಗಿ ವಲಯದಲ್ಲಿ ಕೈಗಾರಿಕೆಗಳನ್ನು ಸ್ಥಾಪಿಸಲು ಹಾಗೂ ಸ್ವಯಂ ಉದ್ಯೋಗ ಚಟುವಟಿಕೆಗಳನ್ನು ಹಮ್ಮಿಕೊಳ್ಳಲು ಸ್ಥಳೀಯ ಉದ್ಯಮಿಗಳಿಗೆ ಹಾಗೂ ಸ್ಥಳೀಯ ನಿರುದ್ಯೋಗಿ ಯುವಕ ಯುವತಿಯರಿಗೆ ನೆರವು ನೀಡಲಾಗುವುದು.

2. 2001–2006ರ ಕೈಗಾರಿಕೆ ನೀತಿ ಅನ್ವಯ ಪಾವಗಡ ತಾಲ್ಲೂಕನ್ನು ಕೈಗಾರಿಕೆಯಲ್ಲಿ ಹಿಂದುಳಿದಿರುವ 'ಸಿ' ವಲಯವೆಂದು ಘೋಷಿಸಲಾಗಿದ್ದು ಇಲ್ಲಿ ಸ್ಥಾಪಿಸಲ್ಪಡುವ ಕೈಗಾರಿಕೆಗಳಿಗೆ ತೆರಿಗೆ ವಿನಾಯಿತಿ ಮತ್ತು ಸಹಾಯಧನ ಮುಂತಾದ ಸವಲತ್ತುಗಳನ್ನು ನೀಡಲಾಗುತ್ತಿದೆ.

3. ಡಾ: ಡಿ.ಎಂ. ನಂಜುಂಡಪ್ಪ ವರದಿ ಅನ್ವಯ ಈ ತಾಲ್ಲೂಕು ಅತಿ ಹೆಚ್ಚು ಹಿಂದುಳಿದ ವರ್ಗಕ್ಕೆ ಸೇರಿದ್ದು, ಈ ತಾಲ್ಲೂಕಿನ ಕೈಗಾರಿಕೀಕರಣ ಯೋಜನೆಯನ್ನು ಪ್ರಸಕ್ತ ಸಾಲಿನ ಆಯವ್ಯಯದಲ್ಲಿ ಘೋಷಿಸಲಾದ " ಕೈಗಾರಿಕಾ ವಿಕಾಸ " ಯೋಜನೆಯಡಿಯಲ್ಲಿ ಕೈಗೊಳ್ಳಲಾಗುವುದು.

1874(2426) ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ): ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಾಮರಾಜನಗರ ಜಿಲ್ಲೆಯು ಸೇರಿದಂತೆ ರಾಜ್ಯಾದ್ಯಂತ ಇರುವ ಮೇಲುಸಕ್ಕರೆ ಶೆಟ್ಟರ್ ಜನಾಂಗದ ಸಮಗ್ರ ಉನ್ನತಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಆ) ಮೇಲುಸಕ್ಕರೆ ಶೆಟ್ಟರ್ ಜನಾಂಗದವರು ಆರ್ಥಿಕವಾಗಿ ಹಿಂದುಳಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ರಾಜ್ಯದಲ್ಲಿರುವ ಮೇಲುಸಕ್ಕರೆ ಶೆಟ್ಟರ್ ಜನಾಂಗದವರಿಗೆ ವಿಶೇಷವಾಗಿ ಯೋಜನೆಯನ್ನು ತಯಾರಿಸಲು ಸರ್ಕಾರ ಕ್ರಮ ಕೈಗೊಂಡಿದೆಯೇ?

ಡಾ. ವೈ. ನಾಗಪ್ಪ (ಸಮಾಜ ಕಲ್ಯಾಣ ಸಚಿವರು):

ಅ) ಪ್ರಸ್ತುತ ರಾಜ್ಯದಲ್ಲಿ ಜಾರಿಯಲ್ಲಿರುವ ಹಿಂದುಳಿದ ವರ್ಗಗಳ ಪಟ್ಟಿಯಲ್ಲಿ ಮೇಲು ಸಕ್ಕರೆ ಶೆಟ್ಟರ್ ಜಾತಿಯು ಸೇರಿರುವುದಿಲ್ಲ.

ಆ) ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.

ಇ) ಉದ್ಭವಿಸುವುದಿಲ್ಲ.

1875(2433) ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ): ಮಾನ್ಯ ಭಾರಿ, ಮಧ್ಯಮ, ಮತ್ತು ಸಣ್ಣ ಕೈಗಾರಿಕೆ ಹಾಗೂ ಮೂಲಭೂತ ಸೌಲಭ್ಯಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?